**Akashvani : Bangalore**
**National Bulletin In Kannada**
**04.12.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.12.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಒಡಿಶಾ ಪ್ರವಾಸ; ಪುರಿ ಜಗನ್ನಾಥ ದೇವಾಲಯಕ್ಕೆ ಇಂದು ಭೇಟಿ

೨. ಇಂದು ಸಂಜೆ ಶ್ರೀಹರಿಕೋಟಾದಿಂದ **PSLV-C59** ವಾಹಕದೊಂದಿಗೆ **Proba 3** ಉಪಗ್ರಹಗಳನ್ನು ಉಡಾವಣೆ ಮಾಡಲಿರುವ ಇಸ್ರೋ

೩. ಬಾಹ್ಯಾಕಾಶ ಕ್ವಾಂಟಮ್ ತಂತ್ರಜ್ಞಾನದಲ್ಲಿ ಸಹಯೋಗ ಕುರಿತು ಇಸ್ರೇಲ್ ಸಚಿವ ನೀಲ್ ಬರ್ಕರ್‌ರೊಂದಿಗೆ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಸಮಾಲೋಚನೆ

೪. ಕಿರಿಯರ ಏಷ್ಯಾಕಪ್ ಹಾಕಿ ಪಂದ್ಯಾವಳಿ; ಸೆಮಿಫೈನಲ್‌ನಲ್ಲಿ ಮಲೇಷಿಯಾ ವಿರುದ್ಧ ಜಯ ಗಳಿಸಿ ಫೈನಲ್ ಪ್ರವೇಶಿಸಿದ ಭಾರತ

**<><*<><>*><>**

ಐದು ದಿನಗಳ ಕಾಲ ಒಡಿಶಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಮೂರು ಪ್ರಮುಖ ರೈಲ್ವೆ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ರಾಜ್ಯದ ಹಲವು ಪ್ರಮುಖ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ನಿನ್ನೆ ಭುವನೇಶ್ವರಕ್ಕೆ ಆಗಮಿಸಿದ ಅವರು, ಸಂಥಾಲಿ ಬರಹಗಾರ ಪಂಡಿತ್ ರಘುನಾಥ್ ಮುರ್ಮು ಅವರ ಪ್ರತಿಮೆಯನ್ನು ಅನಾವರಣಗೊಳಿಸಿದರು ಮತ್ತು ಆದಿವಾಸಿ ಜನರ ಪ್ರಾರ್ಥನಾ ಸ್ಥಳ ಆದಿಮ್ ಓವರ್ ಜರ್ಪಾ ಜಹೆರ್‌ಗೆ ಭೇಟಿ ನೀಡಿದರು. ಇಂದು ರಾಷ್ಟ್ರಪತಿಯವರು, ಪುರಿ ಜಗನ್ನಾಥ ದೇವಾಲಯಕ್ಕೆ ಭೇಟಿ ನೀಡಲಿದ್ದು, ಬಳಿಕ ಗೋಪಬಂಧು ಆಯುರ್ವೇದ ಮಹಾವಿದ್ಯಾಲಯದ ೭೫ ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಭಾರತೀಯ ಸಶಸ್ತ್ರ ಪಡೆಗಳ ಸರ್ವೋಚ್ಚ ಕಮಾಂಡರ್ ಆಗಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಮಧ್ಯಾಹ್ನ ಪುರಿಯ ಬ್ಲೂ ಫ್ಲಾಗ್ ಬೀಚ್‌ನಲ್ಲಿ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್.ಕೆ.ತ್ರಿಪಾಠಿ ಅವರು ಆಯೋಜಿಸಿರುವ ನೌಕಾಪಡೆಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಇದೇ ವೇಳೆ ಅವರು ಭಾರತದ ನೌಕಾ ಪರಾಕ್ರಮದ ಅದ್ಭುತ ಪ್ರದರ್ಶನಕ್ಕೆ ಸಾಕ್ಷಿಯಾಗಲಿದ್ದಾರೆ. ನಾಳೆ ಭುವನೇಶ್ವರದಲ್ಲಿ ಅವರು, ಒಡಿಶಾ ಕೃಷಿ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ ೪೦ ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ ಮತ್ತು ನೂತನ ನ್ಯಾಯಾಲಯ ಸಂಕೀರ್ಣವನ್ನು ಉದ್ಘಾಟಿಸಲಿದ್ದಾರೆ.

**<><*<><>*><>**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯಾದ ಇಸ್ರೋ ಇಂದು ಸಂಜೆ ೪ ಗಂಟೆ ೮ ನಿಮಿಷಕ್ಕೆ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ PSLV-C59 ಉಡಾವಣಾ ವಾಹಕದೊಂದಿಗೆ Proba 3 ಉಪಗ್ರಹಗಳನ್ನು ಉಡಾವಣೆ ಮಾಡಲಿದೆ. PSLV-C59, ಯುರೋಪಿನ ಬಾಹ್ಯಾಕಾಶ ಸಂಸ್ಥೆಯ ಪ್ರೋಬಾ ೩ ಉಪಗ್ರಹಗಳನ್ನು ಅತ್ಯಂತ ದೀರ್ಘ ಕಕ್ಷೆಗೆ ಉಡಾವಣೆ ಮಾಡಲಿದೆ. ಪ್ರೋಬಾ ೩ ಉಪಗ್ರಹಗಳು ಕಕ್ಷೆಯನ್ನು ತಲುಪಿದ ನಂತರ ಎರಡು ಭಾಗಗಳಾಗಿ ವಿಭಜನೆಯಾಗುತ್ತವೆ. ಉಪಗ್ರಹಗಳು ಸೂರ್ಯನ ಕರೋನಾ, ಅದರ ಸುತ್ತಲಿನ ವಾತಾವರಣ, ಬಾಹ್ಯಾಕಾಶ ಹವಾಮಾನ ಮತ್ತು ಸೌರ ಮಾರುತವನ್ನು ಅಧ್ಯಯನ ಮಾಡಲಿವೆ.

**<><*<><>*><>**

ಪ್ರಸ್ತುತ ಭಾರತ ಪ್ರವಾಸದಲ್ಲಿರುವ ಇಸ್ರೇಲ್‌ನ ಕೈಗಾರಿಕೆ ಮತ್ತು ಆರ್ಥಿಕ ಸಚಿವ ನಿರ್ ಬರ್ಕತ್ ಅವರು ನಿನ್ನೆ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ಅವರನ್ನು ಭೇಟಿ ಮಾಡಿದರು. ಉಭಯ ಸಚಿವರ ನಡುವಿನ ಸಭೆಯು ನವೋದ್ಯಮಗಳಲ್ಲಿ, ವಿಶೇಷವಾಗಿ ಬಾಹ್ಯಾಕಾಶ ಮತ್ತು ಕ್ವಾಂಟಮ್ ತಂತ್ರಜ್ಞಾನದಲ್ಲಿ ಸಹಯೋಗ, ನವೀನ ಉಪಕ್ರಮಗಳ ಅಳವಡಿಕೆಯೊಂದಿಗೆ ಕೃಷಿ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸಹಯೋಗದ ವೃದ್ಧಿಗೊಳಿಸುವುದರ ಮೇಲೆ

ಕೇಂದ್ರೀಕರಿಸಿತ್ತು. ಸಭೆಯಲ್ಲಿ, ಡಾ. ಸಿಂಗ್ ಅವರು ಭಾರತದ ರಾಷ್ಟ್ರೀಯ ಕ್ವಾಂಟಮ್ ಮಿಷನ್‌ನ ಪರಿವರ್ತಕ ಸಾಮರ್ಥ್ಯದ ಕುರಿತು ಪ್ರಸ್ತಾಪಿಸಿದರು. ನಿರ್ಣಾಯಕ ಕ್ವಾಂಟಮ್ ತಂತ್ರಜ್ಞಾನಗಳನ್ನು ಸಹ-ಅಭಿವೃದ್ಧಿಪಡಿಸಲು ಭಾರತೀಯ ಸಂಸ್ಥೆಗಳೊಂದಿಗೆ ಪಾಲುದಾರರಾಗಲು ಕೇಂದ್ರ ಸಚಿವರು ಇಸ್ರೇಲ್‌ನ ನವೋದ್ಯಮಗಳನ್ನು ಆಹ್ವಾನಿಸಿದರು. ಬಾಹ್ಯಾಕಾಶ ಪರಿಸರ ವ್ಯವಸ್ಥೆಯಲ್ಲಿ ಭಾರತದ ಬೆಳವಣಿಗೆಯನ್ನು ಪ್ರಸ್ತಾಪಿಸಿದ ಅವರು, ಇಸ್ರೇಲಿ ಬಾಹ್ಯಾಕಾಶ ನವೋದ್ಯಮಗಳು ತಮ್ಮ ಭಾರತೀಯ ಸಹವರ್ತಿಗಳೊಂದಿಗೆ ಸಹಯೋಗಿಸಲು ಅಪಾರ ಸಾಮರ್ಥ್ಯವನ್ನು ಹೊಂದಿವೆ ಎಂದರು

<><*<><>*><>

ಮಹಾರಾಷ್ಟ್ರದಲ್ಲಿ ನೂತನವಾಗಿ ಆಯ್ಕೆಯಾಗಿರುವ ಬಿಜೆಪಿ ಶಾಸಕರು, ಮುಂಬೈನಲ್ಲಿಂದು ಸಭೆ ನಡೆಸಲಿದ್ದು, ತಮ್ಮ ನಾಯಕನನ್ನು ಆಯ್ಕೆ ಮಾಡುವ ನಿರೀಕ್ಷೆಯಿದೆ. ಶಾಸಕರು ತಮ್ಮ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಯಲ್ಲಿ ಸಹಾಯ ಮಾಡಲು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಗುಜರಾತ್ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಅವರನ್ನು ವೀಕ್ಷಕರನ್ನಾಗಿ ಬಿಜೆಪಿ ನಿಯೋಜಿಸಿದೆ. ನಾಳೆ ಸಂಜೆ ೫ ಗಂಟೆಗೆ ದಕ್ಷಿಣ ಮುಂಬೈನ ಆಜಾದ್ ಮೈದಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಸಮ್ಮುಖದಲ್ಲಿ ನೂತನ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಮುಖ್ಯಮಂತ್ರಿ ಸ್ಥಾನಕ್ಕೆ ಬಿಜೆಪಿಯ ಹಿರಿಯ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರ ಹೆಸರು ಮುಂಚೂಣಿಯಲ್ಲಿ ಕೇಳಿಬಂದಿದೆ. ಇತ್ತೀಚೆಗೆ ನಡೆದ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟ ಭರ್ಜರಿ ಜಯ ಸಾಧಿಸಿದೆ.

<><*<><>*><>

ಇಂದು ನೌಕಾಪಡೆಯ ದಿನವನ್ನು ಆಚರಿಸಲಾಗುತ್ತಿದೆ. ಭಾರತೀಯ ನೌಕಾಪಡೆಯ ಸಾಧನೆಗಳು ಮತ್ತು ಪಾತ್ರವನ್ನು ಗುರುತಿಸಲು ಪ್ರತಿ ವರ್ಷ ಡಿಸೆಂಬರ್ ೪ ರಂದು ಈ ದಿನವನ್ನು ಆಚರಿಸಲಾಗುತ್ತದೆ. ೧೯೭೧ ರಲ್ಲಿ ಇದೇ ದಿನದಂದು, ಆಪರೇಷನ್ ಟ್ರೈಡೆಂಟ್ ಸಮಯದಲ್ಲಿ, ಭಾರತೀಯ ನೌಕಾಪಡೆಯು ಪಿಎನ್‌ಎಸ್ ಖೈಬರ್ ಸೇರಿದಂತೆ ನಾಲ್ಕು ಪಾಕಿಸ್ತಾನಿ ಹಡಗುಗಳನ್ನು ಮುಳುಗಿಸಿ, ನೂರಾರು ಪಾಕಿಸ್ತಾನಿ ನೌಕಾಪಡೆಯ ಸಿಬ್ಬಂದಿಯನ್ನು ಹತ್ಯೆಗೈದಿತ್ತು.

<><*<><>*><>

ರಕ್ಷಣಾ ಸ್ವಾಧೀನ ಮಂಡಳಿಯು ೨೧ ಸಾವಿರದ ೭೭೨ ಕೋಟಿ ರೂಪಾಯಿಗಳ ಮೊತ್ತದ ಐದು ಬಂಡವಾಳ ಸ್ವಾಧೀನ ಪ್ರಸ್ತಾವನೆಗಳನ್ನು ಅನುಮೋದಿಸಿದೆ. ನವದೆಹಲಿಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಿನ್ನೆ ರಕ್ಷಣಾ ಸ್ವಾಧೀನ ಮಂಡಳಿಯು, ಭಾರತೀಯ ನೌಕಾಪಡೆಗೆ ೩೧ ಹೊಸ ವಾಟರ್ ಜೆಟ್ ಫಾಸ್ಟ್ ಅಟ್ಯಾಕ್ ಕ್ರಾಫ್ಟ್‌ಗಳ ಖರೀದಿಗೆ ಅನುಮೋದನೆ ನೀಡಿತು.

<><*<><>*><>

ಸೌದಿ ಅರೇಬಿಯಾದ ರಿಯಾದ್‌ನಲ್ಲಿ ನಿನ್ನೆ ಮರುಭೂಮೀಕರಣ ನಿಗ್ರಹಕ್ಕಾಗಿ ವಿಶ್ವಸಂಸ್ಥೆಯ ಕಾಪ್-೧೬ ಸಮಾವೇಶದ ಸಂವಾದ ಕಾರ್ಯಕ್ರಮದಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಇಲಾಖೆ ಸಚಿವ ಭೂಪೇಂದ್ರ ಯಾದವ್ ಭಾಗವಹಿಸಿದ್ದರು. ಭೂಮಿಯ ಅವನತಿಯನ್ನು ಪರಿಸರದ ಸವಾಲಾಗಿ ಗುರುತಿಸುವುದರಿಂದ ಹಿಡಿದು, ಭೂ ಮರುಸ್ಥಾಪನೆಗೆ ಒತ್ತುನೀಡುವುದು, ಕುಸಿದ ಭೂಮಿಯನ್ನು ಪುನಃ ಸ್ಥಾಪಿಸಲು ನಾವೆಲ್ಲರೂ ಸಮಾನ ಪಾಲುದಾರರಾಗಿದ್ದೇವೆ ಎಂದು ಸಚಿವ ಭೂಪೇಂದ್ರ ಯಾದವ್ ಹೇಳಿದ್ದಾರೆ. ಹಸಿರು ಉದ್ಯೋಗಗಳ ಸೃಷ್ಟಿ, ಆಹಾರ ಭದ್ರತೆ ಮತ್ತು ಹವಾಮಾನ ಸ್ಥಿತಿಸ್ಥಾಪಕತ್ವ ನಿರ್ಮಿಸುವುದು, ಗ್ರಾಮೀಣ ಸಮೃದ್ಧಿಯನ್ನು ಉತ್ತೇಜಿಸುವುದು ಸೇರಿದಂತೆ ವಿಶಾಲ ಉದ್ದೇಶಗಳೊಂದಿಗೆ ಸಂಯೋಜಿಸುತ್ತವೆ. ಸಮ್ಮೇಳನದಲ್ಲಿ ಭಾರತದ ಭಾಗವಹಿಸುವಿಕೆಯು ಜಾಗತಿಕ ಪರಿಸರ ಸಹಕಾರ ಮತ್ತು ಸುಸ್ಥಿರ ಭೂ ನಿರ್ವಹಣೆ ಅಭ್ಯಾಸಗಳಿಗೆ ಅದರ ಬದ್ಧತೆಯನ್ನು ಒತ್ತಿಹೇಳುತ್ತದೆ ಎಂದು ಅವರು ತಿಳಿಸಿದರು.

<><*<><>*><>

ಭಾರತವು, ಚೀನಾವನ್ನು ಮೀರಿಸಿ ವಿಶ್ವದ ಅತಿ ದೊಡ್ಡ ದ್ವಿಚಕ್ರ ವಾಹನ ಮಾರುಕಟ್ಟೆಯಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಲೋಕಸಭೆಗೆ ನಿನ್ನೆ ನೀಡಿದ ಲಿಖಿತ ಉತ್ತರದಲ್ಲಿ ಅವರು, ೨೦೨೩ರಲ್ಲಿ ಚೀನಾದಲ್ಲಿ ೧ ಕೋಟಿ ೬೬ ಲಕ್ಷ ದ್ವಿಚಕ್ರ ವಾಹನಗಳು ಮಾರಾಟವಾಗಿವೆ. ಆದರೆ, ಭಾರತದಲ್ಲಿ ೧ ಕೋಟಿ

೭ ಲಕ್ಷಕ್ಕಿಂತ ಹೆಚ್ಚು ದ್ವಿಚಕ್ರ ವಾಹನಗಳನ್ನು ನೋಂದಾಯಿಸಲಾಗಿದೆ ಎಂದು ಹೇಳಿದ್ದಾರೆ. ೨೦೨೩-೨೪ರ ಹಣಕಾಸು ವರ್ಷದಲ್ಲಿ ದೇಶದಲ್ಲಿ ಸುಮಾರು ೯ ಲಕ್ಷದ ೫೦ ಸಾವಿರ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳನ್ನು ತಯಾರಿಸಲಾಗಿದೆ. ಕಳೆದ ಹಣಕಾಸು ವರ್ಷದಲ್ಲಿ ದೇಶದಲ್ಲಿ ೯೨ ಸಾವಿರಕ್ಕೂ ಹೆಚ್ಚು ಎಲೆಕ್ಟ್ರಿಕ್ ಪ್ರಯಾಣಿಕ ವಾಹನಗಳು ಮತ್ತು ಸುಮಾರು ೬ ಲಕ್ಷದ ೩೩ ಸಾವಿರ ತ್ರಿಚಕ್ರ ವಾಹನಗಳನ್ನು ತಯಾರಿಸಲಾಗಿದೆ ಎಂದು ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

**<><*<><>*><>**

೨೦೨೦ರ ಗಾಲ್ವಾನ್ ಕಣಿವೆ ವಿವಾದದ ನಂತರ ಹದಗೆಟ್ಟಿದ್ದ ಭಾರತ-ಚೀನಾ ಸಂಬಂಧಗಳು ನಿರಂತರ ರಾಜತಾಂತ್ರಿಕ ಮಾತುಕತೆಗಳಿಂದಾಗಿ ಸುಧಾರಿಸುತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಲೋಕಸಭೆಗೆ ನಿನ್ನೆ ತಿಳಿಸಿದ್ದಾರೆ. ೨೦೨೦ರಲ್ಲಿ ಗಾಲ್ವಾನ್ ಕಣಿವೆಯಲ್ಲಿ ನಡೆದ ಹಿಂಸಾತ್ಮಕ ಘರ್ಷಣೆಗೆ ಕಾರಣವಾದ ಸನ್ನಿವೇಶಗಳ ಬಗ್ಗೆ ಸದನಕ್ಕೆ ಮಾಹಿತಿ ಇದೆ. ನಿಯಂತ್ರಣ ರೇಖೆಯ ಸಮೀಪದಲ್ಲಿ ಭಾರಿ ಶಸ್ತ್ರಾಸ್ತ್ರಗಳನ್ನು ನಿಯೋಜಿಸಲು ಸಾಕಷ್ಟು ಗಂಭೀರವಾದ ಘಟನೆಗಳು ಸಹ ನಡೆದಿದ್ದವು ಎಂದರು. ಎರಡೂ ದೇಶಗಳ ಗಡಿಯಲ್ಲಿ ಉತ್ತುಂಗಕ್ಕೇರಿದ ಉದ್ವಿಗ್ನತೆಯನ್ನು ತಗ್ಗಿಸಲು, ಶಾಂತಿ ಮತ್ತು ನೆಮ್ಮದಿಯನ್ನು ಪುನಸ್ಥಾಪಿಸಲು ರಾಜತಾಂತ್ರಿಕ ಪ್ರಯತ್ನದ ಅನಿವಾರ್ಯತೆಯೂ ಸಹ ಇತ್ತು ಎಂದು ಸಚಿವರು ವಿವರಿಸಿದ್ದಾರೆ. ಭಾರತ ಮತ್ತು ಚೀನಾ ಗಡಿ ಸಮಸ್ಯೆಯನ್ನು ಪರಿಹರಿಸಲು ಹಲವು ದಶಕಗಳಿಂದ ಮಾತುಕತೆ ನಡೆಸಿವೆ. ಗಡಿ ಇತ್ಯರ್ಥಕ್ಕಾಗಿ ಪರಸ್ಪರ ಸ್ವೀಕಾರ್ಹ ಚೌಕಟ್ಟು ತಲುಪಲು ದ್ವಿಪಕ್ಷೀಯ ಚರ್ಚೆಗಳ ಮೂಲಕ ಚೀನಾದೊಂದಿಗೆ ತೊಡಗಿಸಿಕೊಳ್ಳಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು.

**<><*<><>*><>**

ತೈಲ ಕ್ಷೇತ್ರ ನಿಯಂತ್ರಣ ಮತ್ತು ತಿದ್ದುಪಡಿ ಮಸೂದೆಯನ್ನು ರಾಜ್ಯಸಭೆಯಲ್ಲಿ ನಿನ್ನೆ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರ್ದೀಪ್‌ಸಿಂಗ್ ಪುರಿ ಮಂಡಿಸಿದರು. ಈ ಮಸೂದೆಯು ಖನಿಜ ತೈಲಗಳನ್ನು ಮರುವಾಖ್ಯಾನಿಸುತ್ತದೆ. ಖನಿಜ ತೈಲಗಳಲ್ಲಿ ಕಲ್ಲಿದ್ದಲು, ಲಿಗ್ನೈಟ್, ಹೀಲಿಯಂ ಒಳಗೊಂಡಿರುವುದಿಲ್ಲ. ಈ ಮಸೂದೆಯು, ತೈಲ ಮತ್ತು ಅನಿಲ ವಲಯದಲ್ಲಿ ವ್ಯವಹಾರವನ್ನು ಸಲುಭಗೊಳಿಸುತ್ತದೆ. ಜೈಲು ಶಿಕ್ಷೆಯನ್ನು ರದ್ದುಪಡಿಸಿ, ಹೆಚ್ಚಿನ ದಂಡವನ್ನು ವಿಧಿಸಲಿದೆ ಎಂದು ಸಚಿವ ಹರ್ದೀಪ್‌ಸಿಂಗ್ ಪುರಿ ಹೇಳಿದರು.

**<><*<><>*><>**

ನಮೀಬಿಯಾದಲ್ಲಿ, ಆಡಳಿತಾರೂಢ ಸೌತ್ ವೆಸ್ಟ್ ಆಫ್ರಿಕಾ ಪೀಪಲ್ಸ್ ಆರ್ಗನೈಸೇಷನ್ ಪಕ್ಷದ ನೆಟುಂಬೊ-ನಂಡಿ-ಎನ್‌ಡೈಟ್ವಾ ಅವರು ದೇಶದ ಎಂಟನೇ ಅಧ್ಯಕ್ಷೀಯ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದಾರೆ. ಆ ಮೂಲಕ ನಮೀಬಿಯಾದ ಮೊದಲ ಮಹಿಳಾ ಅಧ್ಯಕ್ಷರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಅವರು ಶೇಕಡಾ ೫೭ ಕ್ಕಿಂತ ಹೆಚ್ಚು ಮತಗಳನ್ನು ಗಳಿಸಿದ್ದಾರೆ ಎಂದು ಚುನಾವಣಾ ಆಯೋಗ ಘೋಷಿಸಿದರೆ, ಅವರ ಹತ್ತಿರದ ಪ್ರತಿಸ್ಪರ್ಧಿ ಪಾಂಡುಲೇನಿ ಇತುಲಾ ಅವರು ಶೇಕಡಾ ೨೬ ರಷ್ಟು ಮತಗಳನ್ನು ಗಳಿಸಿದರು.

**<><*<><>*><>**

ಓಮನ್‌ನ ಮಸ್ಕತ್‌ನಲ್ಲಿ ನಿನ್ನೆ ರಾತ್ರಿ ನಡೆದ ಪುರುಷರ ಕಿರಿಯರ ಏಷ್ಯಾಕಪ್ ಹಾಕಿ ಪಂದ್ಯಾವಳಿಯ ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಭಾರತ ೩-೧ ಗೋಲುಗಳಿಂದ ಮಲೇಷ್ಯಾವನ್ನು ಸೋಲಿಸಿ ಫೈನಲ್ ಪ್ರವೇಶಿಸಿದೆ. ಭಾರತ ಪರ ದಿಲ್‌ರಾಜ್ ಸಿಂಗ್, ರೋಹಿತ್ ಮತ್ತು ಶಾರದಾನಂದ್ ತಿವಾರಿ ಗೋಲು ಗಳಿಸಿ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು. ಇಂದು ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾರತ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ಎದುರಿಸಲಿದೆ. ನಿನ್ನೆ ನಡೆದ ಮೊದಲ ಸೆಮಿಫೈನಲ್‌ನಲ್ಲಿ ಪಾಕಿಸ್ತಾನ ೪-೨ ಗೋಲುಗಳಿಂದ ಜಪಾನ್ ತಂಡವನ್ನು ಸೋಲಿಸಿ ಫೈನಲ್ ಪ್ರವೇಶಿಸಿತ್ತು.

**<><*<><>*><>**

ಯುಎಇ ಯ ಶಾರ್ಜಾ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ೧೯ ವರ್ಷದೊಳಗಿನವರ ಏಕದಿನ ಏಷ್ಯಾಕಪ್ ಕ್ರಿಕೆಟ್ ಟೂರ್ನಿಯ 'ಎ' ಗುಂಪಿನ ಪಂದ್ಯದಲ್ಲಿ ಭಾರತ, ಯುಎಇ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಬೆಳಗ್ಗೆ ೧೦.೩೦ ಕ್ಕೆ ಆರಂಭವಾಗಲಿದೆ. ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯಲಿರುವ 'ಎ' ಗುಂಪಿನ ಮೊತ್ತೊಂದು ಪಂದ್ಯದಲ್ಲಿ ಪಾಕಿಸ್ತಾನ ಹಾಗೂ ಜಪಾನ್ ತಂಡಗಳು ಮುಖಾಮುಖಿಯಾಗಲಿವೆ. ಭಾರತ

ಪ್ರಸ್ತುತ ಗ್ರೂಪ್ 'ಎ' ಅಂಕಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದು, ಸೆಮಿಫೈನಲ್‌ನಲ್ಲಿ ಸ್ಥಾನಪಡೆಯಲು ಇಂದಿನ ಪಂದ್ಯದ ಗೆಲುವು ನಿರ್ಣಾಯಕವಾಗಿದೆ. ಈಗಾಗಲೇ ಆಡಿರುವ ಎರಡು ಪಂದ್ಯಗಳಲ್ಲಿ ಭಾರತ ಒಂದರಲ್ಲಿ ಗೆದ್ದು ಒಂದರಲ್ಲಿ ಸೋಲನುಭವಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**